ದಿನಾಂಕ 09-06-2023 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**<u>ಮುಖ್ಯ ವಿಚಾರಣೆ : 2, 4 ರಿಂದ 7, 9 ರಿಂದ 11 ನೇ ಪ್ರತಿವಾದಿಗಳ ಪರ ಶ್ರೀ ಎಸ್.ಡಿ.ಎಂ ವಕೀಲರಿಂದಃ</u>**

ನಾನು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಸಂಗತಿಗಳನ್ನು ನಾನೇ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿರುವ ಸಂಗತಿಗಳು ಸತ್ಯದಿಂದ ಕೂಡಿದ್ದು, ಪ್ರಮಾಣ ಪತ್ರದಲ್ಲಿರುವ ಸಹಿಗಳು ನನ್ನದೇ ಆಗಿರುತ್ತವೆ.

ಹಿರೇಬೂದಿಹಾಳ ಗ್ರಾಮದ ಸ ನಂಃ 41/1 ಅ ಜಮೀನಿನ 1988-89 ರಿಂದ 2001-02 ನೇ ಸಾಲಿನ 3 ಕೈಬರವಣಿಗೆಯ ಪಹಣಿ ಪತ್ರಿಕೆಗಳ ದೃಢೀಕೃತ ನಕಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿ.ಡಿ-1 ರಿಂದ 3 ಎಂದು, ಡ ಸಂಃ 945 ರ ಕರ ನಿರ್ಧರಣಾ ಪಟ್ಟಿಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿ.ಡಿ-4 ಎಂದು, ಡ ಸಂಃ 1342 ರ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿ.ಡಿ-5 ಎಂದು, ದಿಃ 06-06-1997 ರ ನೋಂದಾಯಿತ ಖರೀದಿ ಪತ್ರಗಳ 2- ದೃಢೀಕೃತ ನಕಲುಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಕ್ರಮವಾಗಿ ನಿ.ಡಿ-6 ಮತ್ತು 7 ಎಂದು ಗುರುತಿಸಲಾಯಿತು.

(ಮುಂದುವರೆದ ಮುಖ್ಯ ವಿಚಾರಣೆಗೆ ಸಮಯಾವಕಾಶ ಕೋರಿದ್ದು, ಮುಂದುವರೆದ ಮುಖ್ಯ ವಿಚಾರಣೆಗೆ ಮುಂದೂಡಲಾಯಿತು).

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)**

ಓ. ಹೇ. ಕೆ ಸರಿ ಇದೆ ಎಂದು
ಒಪ್ಪಿರುತ್ತಾರೆ.

**Sd/-**

ದಿವಾಣಿ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ

ಹಾನಗಲ್ಲ.

ಸಾಕ್ಷಿದಾರರ ಸಹಿ